**ಕರ್ನಾಟಕ ವಿಧಾನ ಪರಿಷತ್ತು**

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1360
ಸದಸ್ಯರ ಹೆಸರು : ಶ್ರೀ ವಿಜಯಸಿಂಗ್
ಉತ್ತರಿಸುವ ದಿನಾಂಕ : 24/12/2021
ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆ ಬಸವಕಲ್ಯಾಣ ಹಾಗೂ ಹುಲಸೂರು ತಾಲ್ಲೂಕಿನಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ನಡೆಯುತ್ತಿರುವ ಹಾಸ್ಟೆಲ್‌ಗಳಲ್ಲಿ ಮೂಲಭೂತ ಸೌಲಭ್ಯವಿಲ್ಲದೆ ವಿದ್ಯಾರ್ಥಿಗಳು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;(ತಾಲ್ಲೂಕು ವಿವರ ನೀಡುವುದು) | ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಬೀದರ್ ಜಿಲ್ಲೆಯ ಬಸವಕಲ್ಯಾಣ ತಾಲೂಕು ವ್ಯಾಪ್ತಿಯಲ್ಲಿ 11 ಮೆಟ್ರಿಕ್ ಪೂರ್ವ ಮತ್ತು 02 ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳು ಕಾರ್ಯನಿರ್ವಹಿಸುತ್ತಿವೆ.<br><br>ಮೇಲೆ ತಿಳಿಸಿದ 11 ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳ ಪೈಕಿ ಹುಲಸೂರು ಕಂದಾಯ ತಾಲೂಕು ವ್ಯಾಪ್ತಿಯಲ್ಲಿ 03 ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳು ಕಾರ್ಯನಿರ್ವಹಿಸುತ್ತಿವೆ. ಸದರಿ ವಿದ್ಯಾರ್ಥಿ ನಿಲಯಗಳಲ್ಲಿ ಎಲ್ಲಾ ರೀತಿಯ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲಾಗಿರುತ್ತದೆ. |
| ಆ) | ತಾಲ್ಲೂಕುಗಳಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ನೀಡಲಾಗುತ್ತಿರುವ ವಿದ್ಯಾರ್ಥಿನಿಲಯಗಳು ಎಷ್ಟು ; ವಿದ್ಯಾರ್ಥಿನಿಲಯಗಳು ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿದ್ದು ಯಾವ ಯಾವ ವಿದ್ಯಾರ್ಥಿನಿಲಯಗಳು ಸ್ವಂತ ಕಟ್ಟಡಗಳನ್ನು ನಡೆಯುತ್ತಿವೆ?(ತಾಲ್ಲೂಕುವಾರು ವಿವರ ನೀಡುವುದು) | ಸಮಾಜ ಕಲ್ಯಾಣ ಇಲಾಖೆಯಿಂದ ಬೀದರ್ ಜಿಲ್ಲೆಯಲ್ಲಿ ಒಟ್ಟು 61 ವಿದ್ಯಾರ್ಥಿ ನಿಲಯಗಳನ್ನು ನಿರ್ವಹಿಸಲಾಗುತ್ತಿದ್ದು, ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ಸ್ವಂತ ಕಟ್ಟಡ/ಬಾಡಿಗೆ ಕಟ್ಟಡಗಳನ್ನು ನಿರ್ವಹಿಸಲಾಗುತ್ತಿರುವ ವಿವರಗಳು ಕೆಳಕಂಡಂತಿದೆ. |

| ತಾಲ್ಲೂಕು | ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳ ಸಂಖ್ಯೆ | ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ ಸಂಖ್ಯೆ | ಒಟ್ಟು | ಸ್ವಂತ ಕಟ್ಟಡಗಳ ಸಂಖ್ಯೆ | ಬಾಡಿಗೆ ಕಟ್ಟಡಗಳ ಸಂಖ್ಯೆ |
|---|---|---|---|---|---|
| ಔರಾದ | 4 | 03 | 07 | 04 | 03 |
| ಬಸವಕಲ್ಯಾಣ | 11 | 02 | 13 | 11 | 02 |
| ಭಾಲ್ಕಿ | 9 | 02 | 11 | 10 | 01 |
| ಬೀದರ್ | 7 | 09 | 16 | 12 | 04 |
| ಹುಮನಾಬಾದ | 11 | 02 | 13 | 13 | 0 |
| ಒಟ್ಟು | 42 | 18 | 60 | 50 | 10 |

ಸಕಇ 505 ಪಕವಿ 2021

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು